## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 168

ಸದಸ್ಯರ ಹೆಸರು : ಶ್ರೀ ಡಿ.ಟಿ. ಶ್ರೀನಿವಾಸ್ (ಡಿಟಿಎಸ್) (ಶಿಕ್ಷಕರ ಕ್ಷೇತ್ರ)

ಉತ್ತರಿಸಬೇಕಾದ ದಿನಾಂಕ : 10.12.2024

ಉತ್ತರಿಸುವವರು : ಗಣಿ ಮತ್ತು ಭೂವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು

<table>
<tr><th>ಕ್ರ.<br>ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ರಾಜ್ಯದಲ್ಲಿ ಗಣಿಗಾರಿಕೆ ನಡೆಯುವ ಪ್ರದೇಶಗಳ ಸಂಖ್ಯೆ ಎಷ್ಟು ಯಾವುವು;</td><td>ರಾಜ್ಯದಲ್ಲಿ ಮುಖ್ಯ ಖನಿಜ ಮತ್ತು ಉಪಖನಿಜಗಳ ಗಣಿಗಾರಿಕೆಗೆ ಗುತ್ತಿಗೆಗಳನ್ನು ಮಂಜೂರು ಮಾಡಲಾಗಿದ್ದು, ಪ್ರಸ್ತುತ ಗಣಿ ಕಾರ್ಯ ನಡೆಸುತ್ತಿರುವ ಗುತ್ತಿಗೆಗಳ ವಿವರ ಕೆಳಕಂಡಂತಿದೆ:
<table>
<tr><th>ಕ್ರ.<br>ಸಂ</th><th>ಖನಿಜಗಳ ವಿಧ</th><th>ಮಂಜೂರಾದ ಒಟ್ಟು ಗುತ್ತಿಗೆಗಳ ಸಂಖ್ಯೆ</th><th>ಕಾರ್ಯನಿರ್ವಹಿಸುತ್ತಿರುವ ಗುತ್ತಿಗೆಗಳ ಸಂಖ್ಯೆ</th></tr>
<tr><td>1</td><td>ಮುಖ್ಯ ಖನಿಜ</td><td>245</td><td>105</td></tr>
<tr><td>2</td><td>ನಿರ್ಧಿಷ್ಟ ಉಪಖನಿಜ</td><td>744</td><td>368</td></tr>
<tr><td>3</td><td>ನಿರ್ಧಿಷ್ಟವಲ್ಲದ ಉಪಖನಿಜ (ಮರಳು ಹೊರತುಪಡಿಸಿ)</td><td>3253</td><td>2266</td></tr>
<tr><td>4</td><td>ಮರಳು</td><td>214</td><td>214</td></tr>
</table></td></tr>
<tr><td>ಆ)</td><td>ಗಣಿಗಾರಿಕೆ ನಡೆಸಲು ಸರ್ಕಾರವು ನಿಗಧಿಪಡಿಸಿರುವ ಮಾನದಂಡಗಳೇನು; (ಮಾಹಿತಿ ನೀಡುವುದು)</td><td>ಮುಖ್ಯ ಖನಿಜಗಳ ಸಂಬಂಧ ಖನಿಜಗಳ ಲಭ್ಯತೆ ದೃಢಪಟ್ಟಿರುವ ಪ್ರದೇಶಗಳಲ್ಲಿ ಎಂಎಂಡಿಆರ್ ತಿದ್ದುಪಡಿ ಕಾಯ್ದೆ, 2015 ರ ಕಲಂ 10(B) ರಡಿಯಲ್ಲಿ ಹರಾಜು ಮೂಲಕ ಗಣಿಗುತ್ತಿಗೆ ಮಂಜೂರು ಮಾಡಲು ಅವಕಾಶ ಕಲ್ಪಿಸಲಾಗಿದೆ. ಖನಿಜ ಲಭ್ಯತೆ ದೃಢಪಡದ ಪ್ರದೇಶಗಳಲ್ಲಿ ಎಂಎಂಡಿಆರ್ ತಿದ್ದುಪಡಿ ಕಾಯ್ದೆ, 2015 ರ ಕಲಂ 11 ರಡಿಯಲ್ಲಿ ಸಂಯುಕ್ತ ಪರವಾನಿಗೆ (Composite Licence) (Prospecting-cum-Mining Lease) ನ್ನು ಸದರಿ ಕಾಯ್ದೆಯಡಿಯಲ್ಲಿ ರೂಪಿಸಲಾದ Mineral (Auction) Rules, 2015ರ ನಿಯಮ 9(4) ಮತ್ತು 10 ರಂತೆ ಹರಾಜು ಮಾಡಿ ಯಶಸ್ವಿಯಾದ ಬಿಡ್‌ದಾರರನ್ನು ಪರಿಗಣಿಸಿದ ನಂತರ The Mineral (Auction) Rules, 2015 ಮತ್ತು Mineral (Other Than Atomic and Hydro Carbons Energy Minerals) Concession Rules 2016 ರಡಿ ಗಣಿಗುತ್ತಿಗೆ ಮಂಜೂರು ಮಾಡಲು ಅವಕಾಶ ಕಲ್ಪಿಸಲಾಗಿದೆ.<br><br>ಎಂ.ಎಂ. (ಡಿ & ಆರ್) 1957 ರ ಸೆಕ್ಷನ್-15 ರಂತೆ ರಾಜ್ಯ ಸರ್ಕಾರಗಳಿಗೆ ನೀಡಿರುವ ಅಧಿಕಾರದನ್ವಯ ರಾಜ್ಯದಲ್ಲಿ ಉಪಖನಿಜಗಳ ಗಣಿಗಾರಿಕೆಗೆ ಗುತ್ತಿಗೆ ಮಂಜೂರಾತಿ ನಿಯಂತ್ರಣ ಕುರಿತು ಕರ್ನಾಟಕ ಉಪಖನಿಜ ರಿಯಾಯಿತಿ ನಿಯಮಗಳು-1994ನ್ನು ಜಾರಿಗೆ ತರಲಾಗಿದ್ದು, ಸದರಿ ನಿಯಮಗಳಂತೆ ಉಪಖನಿಜಗಳ ಗಣಿಗಾರಿಕೆಗೆ ಗುತ್ತಿಗೆಗಳನ್ನು ಪಡೆಯುವುದು ಕಡ್ಡಾಯವಾಗಿರುತ್ತದೆ.<br><br>ಸರ್ಕಾರಿ ಜಮೀನುಗಳಲ್ಲಿ ಲಭ್ಯವಿರುವ ಉಪಖನಿಜ ನಿಕ್ಷೇಪಗಳನ್ನು ಗಣಿ ಮತ್ತು ಭೂವಿಜ್ಞಾನ ಇಲಾಖೆಯಿಂದ ಗುರುತಿಸಿ ಕಂದಾಯ ಮತ್ತು ಅರಣ್ಯ ಇಲಾಖೆಯಿಂದ ನಿರಾಕ್ಷೇಪಣಾ ಪತ್ರ ಪಡೆದ ನಂತರ ಅಧಿಸೂಚನೆ ಜಾರಿ ಮಾಡಬೇಕಾಗಿರುತ್ತದೆ. ನಂತರ ಜಿಲ್ಲಾ ಟಾಸ್ಕ್ ಫೋರ್ಸ್ (ಗಣಿ) ಸಮಿತಿಯಿಂದ ಗುರುತಿಸಿರುವ ಉಪಖನಿಜದ</td></tr>
</table>

| | | |
|---|---|---|
| | | ನಿಕ್ಷೇಪದ ಪ್ರದೇಶದಲ್ಲಿ ಗಣಿಗಾರಿಕೆ ನಡೆಸಲು ಟೆಂಡರ್ ಕಂ ಹರಾಜು ಪ್ರಕ್ರಿಯೆ ಕೈಗೊಂಡು ನಿರ್ದಿಷ್ಟ ಉಪಖನಿಜಗಳಿಗೆ ಸರ್ಕಾರದಿಂದ ಮತ್ತು ನಿರ್ದಿಷ್ಟವಲ್ಲದ ಉಪಖನಿಜಗಳಿಗೆ ಸಂಬಂಧಿಸಿದಂತೆ ನಿರ್ದೇಶಕರಿಂದ ಬಿಡ್ ಸ್ಥಿರೀಕರಿಸಿಕೊಂಡ ನಂತರ ಯಶಸ್ವಿ ಬಿಡ್ದಾರರಿಂದ ಅನುಮೋದಿತ ಕ್ವಾರಿಯಿಂಗ್ ಪ್ಲಾನ್ ಮತ್ತು ಪರಿಸರ ಅನುಮತಿ ಪತ್ರ ಪಡೆದು ಗುತ್ತಿಗೆಯನ್ನು ಮಂಜೂರು ಮಾಡಲಾಗುತ್ತದೆ.<br><br>ದಿ:17-03-2023 ರಂದು ಸರ್ಕಾರವು ಕರ್ನಾಟಕ ಉಪಖನಿಜ ರಿಯಾಯಿತಿ (ತಿದ್ದುಪಡಿ) ನಿಯಮಗಳು-2023ನ್ನು ಜಾರಿಗೆ ತಂದಿದ್ದು, ದಿ:12-08-2016ರ ಪೂರ್ವದಲ್ಲಿ ಕಲ್ಲುಗಣಿ ಗುತ್ತಿಗೆ ಮಂಜೂರಾತಿ ಕೋರಿ ಸಲ್ಲಿಸಿದ್ದ ಅರ್ಜಿಗಳನ್ನು ಪರಿಗಣಿಸಲಾಗಿದ್ದು, ಸದರಿ ಅರ್ಜಿಗಳ ಪ್ರದೇಶಕ್ಕೆ ಕಂದಾಯ ಮತ್ತು ಅರಣ್ಯ ಇಲಾಖೆಯಿಂದ ನಿರಾಕ್ಷೇಪಣಾ ಪತ್ರ, ಅನುಮೋದಿತ ಕ್ವಾರಿಯಿಂಗ್ ಪ್ಲಾನ್ ಮತ್ತು ಪರಿಸರ ಅನುಮತಿ ಪತ್ರ ಪಡೆದ ನಂತರ ಕಲ್ಲುಗಣಿ ಗುತ್ತಿಗೆ ಮಂಜೂರಾತಿಗೆ ಕ್ರಮವಹಿಸಬೇಕಾಗಿರುತ್ತದೆ.<br><br>ಪಟ್ಟಾ ಜಮೀನುಗಳಲ್ಲಿ ನಿರ್ದಿಷ್ಟ ಹಾಗೂ ನಿರ್ದಿಷ್ಟವಲ್ಲದ ಉಪಖನಿಜಗಳ ಗಣಿಗಾರಿಕೆಗೆ ಪಟ್ಟಾದಾರರಿಗೆ ಅಥವಾ ಪಟ್ಟಾದಾರರು ಒಪ್ಪಿಗೆ ನೀಡುವ ವ್ಯಕ್ತಿಗಳಿಗೆ ಕಂದಾಯ ಮತ್ತು ಅರಣ್ಯ ಇಲಾಖೆ ನಿರಾಕ್ಷೇಪಣಾ ಪತ್ರ, ಭೂಪರಿವರ್ತನೆ ಆದೇಶ, ಅನುಮೋದಿತ ಕ್ವಾರಿಯಿಂಗ್ ಪ್ಲಾನ್ ಮತ್ತು ಪರಿಸರ ಅನುಮತಿ ಪತ್ರ ಪಡೆದು ಜಿಲ್ಲಾ ಟಾಸ್ಕ್ ಫೋರ್ಸ್ (ಗಣಿ) ಸಮಿತಿಯಲ್ಲಿ ಮಂಡಿಸಿ ಅನುಮೋದನೆ ಪಡೆದು ಸಂಬಂಧಪಟ್ಟ ಜಿಲ್ಲೆಯ ಉಪ ನಿರ್ದೇಶಕರು/ಹಿರಿಯ ಭೂವಿಜ್ಞಾನಿ ರವರಿಂದ ಕಲ್ಲುಗಣಿಗಾರಿಕೆಗೆ ಲೈಸೆನ್ಸ್ ನೀಡಲಾಗುತ್ತಿದೆ.<br><br>ಮುಖ್ಯ ಖನಿಜ ಗಣಿಗುತ್ತಿಗೆಗಳನ್ನು Mineral (Other Than Atomic and Hydro Carbons Energy Minerals) Concession Rules 2016 ರ Schedule-VII ರಂತೆ ಮತ್ತು ಉಪ ಖನಿಜಗಳ ಗುತ್ತಿಗೆಗಳನ್ನು ಕರ್ನಾಟಕ ಉಪಖನಿಜ ರಿಯಾಯಿತಿ ನಿಯಮಗಳು-1994ರ ನಮೂನೆ-ಇ ರಲ್ಲಿನ ಗುತ್ತಿಗೆ ಕರಾರು, ಅನುಮೋದಿತ ಕ್ವಾರಿಯಿಂಗ್ ಪ್ಲಾನ್ ಮತ್ತು ಪರಿಸರ ಅನುಮತಿ ಪತ್ರದಲ್ಲಿನ ಷರತ್ತು ಮತ್ತು ನಿಬಂಧನೆಗಳಿಗೆ ಒಳಪಟ್ಟು ನೀಡಲಾಗುತ್ತಿದೆ. |
| ಇ) | ಗಣಿಗಾರಿಕೆ ಮಂಜೂರು ಮಾಡುವಾಗ ಮೀಸಲಾತಿಯನ್ನು ಅಳವಡಿಸಲಾಗಿದೆಯೇ; ಹಾಗಿದ್ದಲ್ಲಿ ಪ್ರವರ್ಗ-I ಜಾತಿಗಳಿಗೆ ನಿಗಧಿಪಡಿಸಿದ ಮೀಸಲಾತಿ ಪ್ರಮಾಣ ಎಷ್ಟು; | ಮುಖ್ಯ ಖನಿಜಗಳ ಸಂಬಂಧ ಎಂ. ಎಂ (ಡಿ&ಆರ್) ಕಾಯ್ದೆ-1957 ಭಾರತ ಸರ್ಕಾರದಿಂದ ರೂಪಿಸಲ್ಪಟ್ಟಿದ್ದು, ಸದರಿ ಕಾಯ್ದೆಯಂತೆ ಮುಖ್ಯ ಖನಿಜದ ಗಣಿಗುತ್ತಿಗೆ ಮಂಜೂರಾತಿಯಲ್ಲಿ ಮೀಸಲಾತಿಯನ್ನು ಕಲ್ಪಿಸಿರುವುದಿಲ್ಲ.<br><br>ಕರ್ನಾಟಕ ಉಪಖನಿಜ ರಿಯಾಯಿತಿ (ತಿದ್ದುಪಡಿ) ನಿಯಮಗಳು-2016ರ ದಿ:12-08-2016ರಲ್ಲಿ ಉಪ ಖನಿಜಗಳ ಗಣಿಗುತ್ತಿಗೆಗಳ ಮಂಜೂರಾತಿಯನ್ನು ಟೆಂಡರ್ ಕಂ ಹರಾಜು ಮೂಲಕ ಮೀಸಲಾತಿ ನಿಗಧಿಪಡಿಸಿ ವಿಲೇಪಡಿಸಲು ಅವಕಾಶ ಕಲ್ಪಿಸಲಾಗಿರುತ್ತದೆ.<br><br>ಮುಂದುವರೆದು, ಕರ್ನಾಟಕ ಉಪಖನಿಜ ರಿಯಾಯಿತಿ ನಿಯಮಗಳು-1994ರ ನಿಯಮ-3-F ರಂತೆ ಅನುಸೂಚಿತ ಜಾತಿ / ಪಂಗಡ, ವಂಶ ಪಾರಂಪರಿಕವಾಗಿ ಕಲ್ಲುಗಣಿಗಾರಿಕೆಯನ್ನೇ ಅವಲಂಬಿಸಿ ಜೀವನ ಸಾಗಿಸುತ್ತಿರುವ ವ್ಯಕ್ತಿಗಳು/ನೋಂದಾಯಿತ ಸಂಘ ಸಂಸ್ಥೆಗಳಿಗೆ ಹರಾಜು ರಹಿತವಾಗಿ ಕಟ್ಟಡ ಕಲ್ಲುಗಣಿ ಗುತ್ತಿಗೆಗಳನ್ನು ಮಂಜೂರು ಮಾಡಲು ನಿಯಮದಲ್ಲಿ ಅವಕಾಶ ಕಲ್ಪಿಸಲಾಗಿರುತ್ತದೆ. ಪ್ರವರ್ಗ-I ವರ್ಗದವರಿಗೆ ಕಲ್ಲುಗಣಿಗಾರಿಕೆಗೆ ಮೀಸಲಾತಿ ಕಲ್ಪಿಸಿರುವುದಿಲ್ಲ. |

| | | |
|---|---|---|
| ಈ) | ಹಿರಿಯೂರು ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಗಣಿ ಮತ್ತು ಭೂವಿಜ್ಞಾನ ಇಲಾಖೆಯಿಂದ ಗಣಿಗಾರಿಕೆಗೆ ಗುರುತಿಸಿರುವ ಪ್ರದೇಶಗಳಾವುವು; ಗುರುತಿಸಿದ್ದರೆ ಅಲ್ಲಿ ಗಣಿಗಾರಿಕೆ ಪ್ರಾರಂಭವಾಗಿದೆಯೇ, ಪ್ರಾರಂಭವಾಗದೇ ಇದ್ದರೆ ಇವು ಯಾವ ಹಂತದಲ್ಲಿದೆ? | ಹಿರಿಯೂರು ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಯಾವುದೇ ಮುಖ್ಯ ಖನಿಜ ಗಣಿ ಗುತ್ತಿಗೆಗಳನ್ನು ಮಂಜೂರು ಮಾಡಿರುವುದಿಲ್ಲ.<br>ಮುಂದುವರೆದು, ಉಪಖನಿಜ ಗಣಿ ಗುತ್ತಿಗೆಗಳನ್ನು ಟೆಂಡರ್ ಕಂ ಹರಾಜು ಮೂಲಕ ಮಂಜೂರು ಮಾಡಲು ಯಾವುದೇ ಬ್ಲಾಕ್ ಗಳನ್ನು ಗುರುತಿಸಿರುವುದಿಲ್ಲ.<br>ಪ್ರಸ್ತುತ, ಹಿರಿಯೂರು ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯ ಕೋಡಿಹಳ್ಳಿ ಗ್ರಾಮದ ಸರ್ವೆ ನಂ.222ರಲ್ಲಿ 02 ಕಟ್ಟಡ ಕಲ್ಲುಗಣಿ ಗುತ್ತಿಗೆಗಳನ್ನು ಮಂಜೂರು ಮಾಡಲಾಗಿದ್ದು, ಸದರಿ ಪ್ರದೇಶಗಳಲ್ಲಿ ಸ್ಥಳೀಯ ಸಮಸ್ಯೆಗಳಿಂದ ಕಲ್ಲು ಗಣಿಗಾರಿಕೆ ಪ್ರಾರಂಭವಾಗಿರುವುದಿಲ್ಲ. |

**ಸಂಖ್ಯೆ: ಸಿಐ 220 ಎಂಎಂಎಂ 2024**

**(ಎಸ್.ಎಸ್. ಮಲ್ಲಿಕಾರ್ಜುನ್)**
**ಗಣಿ ಮತ್ತು ಭೂವಿಜ್ಞಾನ ಹಾಗೂ**
**ತೋಟಗಾರಿಕೆ ಸಚಿವರು**